**File No: RDPR/169/KSS/2020-RDPR SO SERV C-RDPR SEC**

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಜಿಲ್ಲಾ ಪಂಚಾಯತ್ ಕಛೇರಿ ಹಾಗೂ ಅದರಡಿ ಬರುವ ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಫ್-ಸಿ ಮತ್ತು -ಡಿ ವೃಂದದ ನೌಕರರ ಸೇವಾ ವಿಷಯಗಳನ್ನು ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವರ್ಗಾಯಿಸುವ ಬಗ್ಗೆ- ಆದೇಶ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ:RDPR 52 GPS 2020, ದಿನಾಂಕ:07.5.2020.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 469 ಗ್ರಾಪಂಅ 2020, ದಿನಾಂಕ:04.6.2020.
3. ನಿರ್ದೇಶಕರು, ಪಂಚಾಯತ್ ರಾಜ್ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆ ದಿನಾಂಕ:14.7.2020

ಪ್ರಸ್ತಾವನೆ:

ಕರ್ನಾಟಕ ರಾಜ್ಯದಲ್ಲಿನ ಪಂಚಾಯತ್ ರಾಜ್ ಸಂಸ್ಥೆಗಳು ಸುಗಮವಾಗಿ ಕಾರ್ಯನಿರ್ವಹಿಸಲು ಅನುಕೂಲ ಮಾಡಿಕೊಡುವ ದಿಸೆಯಲ್ಲಿ ಸರ್ಕಾರವು ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:07.5.2020 ರ ಆದೇಶದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವನ್ನು ಸ್ಥಾಪಿಸಲಾಗಿದೆ.

ಮೇಲಿನಂತೆ ಸ್ಥಾಪಿಸಲಾದ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಮೇಲೆ ಓದಲಾದ ಕ್ರಮಾಂಕ (2) ರಲ್ಲಿ ವಿವಿಧ ವೃಂದದ ಹುದ್ದೆಗಳನ್ನು ಹಂಚಿಕೆ ಮಾಡಿ ಆದೇಶ ಹೊರಡಿಲಾಗಿದೆ. ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವಿಷಯಗಳ ಹಂಚಿಕೆ ಬಗ್ಗೆ ದಿನಾಂಕ:14.7.2020 ರಂದು ನಿರ್ದೇಶಕರು (ಪಂಚಾಯತ್ ರಾಜ್) ಇವರ ಅಧ್ಯಕ್ಷತೆಯಲ್ಲಿ ಸಭೆ ನಡೆದಿದ್ದು, ಮೇಲೆ ಓದಲಾದ ಕ್ರಮಾಂಕ (3) ರ ಸಭೆಯ ನಡವಳಿಯಲ್ಲಿ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವರ್ಗಾಯಿಸಬೇಕಾದ ವಿಷಯಗಳ ಬಗ್ಗೆ ತಿಳಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸೇವೆಗಳು-ಸಿ ಶಾಖೆಯಲ್ಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದದ ಅಧಿಕಾರಿಗಳ ಸೇವಾ ವಿಷಯ ಹಾಗೂ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ

Scanned by CamScanner

ಗ್ರೂಪ್ –ಸಿ ಮತ್ತು ಡಿ ವೃಂದದ ನೌಕರರ ಸೇವಾ ವಿಷಯಗಳನ್ನು ನಿರ್ವಹಿಸುತ್ತಿದ್ದು, ಪಂಚಾಯತ್ ರಾಜ್ ಆಯುಕ್ತಾಲಯ ಸೃಜನೆಯ ಕಾರಣ ತಕ್ಷಣದಿಂದ ಜಾರಿಗೆ ಬರುವಂತೆ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್ –ಸಿ ಮತ್ತು ಡಿ ವೃಂದದ ನೌಕರರ ಸೇವಾ ವಿಷಯಗಳನ್ನು ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವರ್ಗಾಯಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 169 ಕೆ.ಎಸ್.ಎಸ್ 2020 , ಬೆಂಗಳೂರು,**

**ದಿನಾಂಕ:11.9.2020**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-ಸಿ ಮತ್ತು ಡಿ ವೃಂದದ ನೌಕರರ ಸಂಪೂರ್ಣ ಸೇವಾ ವಿಷಯವನ್ನು ತಕ್ಷಣ ದಿಂದ ಜಾರಿಗೆ ಬರುವಂತೆ ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ಇವರಿಗೆ ಹಂಚಿಕೆ ಮಾಡಿ ಆದೇಶಿಸಿದೆ.

ತಾಲ್ಲೂಕು ಪಂಚಾಯತ್‌ಗಳಲ್ಲಿ ಮಂಜೂರಾಗಿರುವ ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ವೃಂದವು 'ಬಿ' ವೃಂದಕ್ಕೆ ಸೇರಿದ್ದು, ಸದರಿ ವೃಂದದ ಸೇವಾ ವಿಷಯವನ್ನು ಯಥಾಸ್ಥಿತಿಯಂತೆ ಸರ್ಕಾರದ ಹಂತದಲ್ಲಿ ನಿರ್ವಹಿಸಲಾಗುತ್ತದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ಡಿ.ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
(ಸೇವೆಗಳು- ಬಿ ಮತ್ತು ಸಿ ಶಾಖೆ)

ಇವರಿಗೆ:-

1. ಮಹಾಲೇಖಪಾಲರು (ಎ ಮತ್ತುಇ), ಕರ್ನಾಟಕ , ಬೆಂಗಳೂರು.

Scanned by CamScanner

2. ಆಯುಕ್ತರು ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
4. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು
6. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು)
7. ಶಾಖಾ ರಕ್ಷಾ ಕಡತ/ಗಣಕ ಕೋಶ/ಹೆಚ್ಚುವರಿ ಪ್ರತಿ

ಮಾಹಿತಿಗಾಗಿ

1. ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
2. ನಿರ್ದೇಶಕರು, ಪಂಚಾಯತ್ ರಾಜ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಸರ್ಕಾರದ ಅಧೀನ ಕಾರ್ಯದರ್ಶಿ, ಸೇವೆಗಳು-ಎ ಶಾಖೆ ಮತ್ತು ಸೇವೆಗಳು-ಬಿ ಶಾಖೆ ಗ್ರಾ.ಅ.ಪಂ.ರಾಜ್ ಇಲಾಖೆ

Scanned by CamScanner